ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)

ಒಂಭತ್ತನೇ ಅಧಿವೇಶನ

(ಮುಂದುವರೆದ ಉಪವೇಶನ)

ಕಾರ್ಯಕಲಾಪಗಳ ಪಟ್ಟಿ

ಮಂಗಳವಾರ, ದಿನಾಂಕ 9ನೇ ಮಾರ್ಚ್, 2021

(ಸಮಯ: ಬೆಳಿಗ್ಗೆ 11.00 ಗಂಟೆಗೆ)

----

1. ಸಂತಾಪ ಸೂಚನೆ

2. ಕಾರ್ಯದರ್ಶಿಯವರ ವರದಿ

ಕಾರ್ಯದರ್ಶಿಯವರು:-

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಸಭೆಯ ಮುಂದೆ ಮಂಡಿಸುವುದು.

3. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಏಳನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಏಳನೇ ಪಟ್ಟಿ

4. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಶ್ರೀ ಬಿ.ಎಸ್. ಯಡಿಯೂರಪ್ಪ (ಮುಖ್ಯಮಂತ್ರಿಗಳು) ಅವರು:

ಅ) ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ, ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು ನೀಡಿರುವ 2019-20ನೇ ಸಾಲಿನ ಧನವಿನಿಯೋಗ ಲೆಕ್ಕಗಳು ಮತ್ತು ಹಣಕಾಸು ಲೆಕ್ಕಗಳನ್ನು (ಸಂಪುಟ I ಮತ್ತು II) ಸಭೆಯ ಮುಂದಿಡುವುದು.

ಆ) ಮಾನ್ಯ ಸದಸ್ಯರುಗಳಿಗೆ ಪ್ರತ್ಯೇಕವಾಗಿ ಕಳುಹಿಸಲಾಗಿರುವ ಮೂರನೇ ಹಾಗೂ ನಾಲ್ಕನೇ ಪಟ್ಟಿಯ ರೀತ್ಯಾ.

5. ಶಾಸನ ರಚನೆ

ವಿಧೇಯಕಗಳನ್ನು ಮಂಡಿಸುವುದು

1. ಶ್ರೀ ಎಸ್.ಟಿ. ಸೋಮಶೇಖರ್ (ಮಾನ್ಯ ಸಹಕಾರ ಸಚಿವರು) ಅವರು:–

ಅ) 2021ನೇ ಸಾಲಿನ ಕರ್ನಾಟಕ ಸೊಸೈಟಿಗಳ ನೋಂದಣಿ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

2. ಶ್ರೀ ಎಸ್.ಟಿ. ಸೋಮಶೇಖರ್ (ಮಾನ್ಯ ಸಹಕಾರ ಸಚಿವರು) ಅವರು:–

ಅ) 2021ನೇ ಸಾಲಿನ ಕರ್ನಾಟಕ ಲೇವಾದೇವಿದಾರರ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

3. ಶ್ರೀ ಎನ್. ನಾಗರಾಜ (ಎಂ.ಟಿ.ಬಿ.) (ಮಾನ್ಯ ಪೌರಾಡಳಿತ ಮತ್ತು ಸಕ್ಕರೆ ಸಚಿವರು) ಅವರು:–

ಅ) 2021ನೇ ಸಾಲಿನ ಕರ್ನಾಟಕ ಪೌರಸಭೆಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

6. ವಿತ್ತೀಯ ಕಾರ್ಯಕಲಾಪಗಳು

2021–22ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲೆ ಸಾಮಾನ್ಯ ಚರ್ಚೆ.

7. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ದೊಡ್ಡಗೌಡರ ಮಹಾಂತೇಶ್ ಬಸವಂತರಾಯ್ ಅವರು** – ಕಿತ್ತೂರು ತಾಲ್ಲೂಕಿನಲ್ಲಿ ಒಳಾಂಗಣ ಮತ್ತು ಹೊರಾಂಗಣ ಕ್ರೀಡಾಂಗಣ ಹಾಗೂ ಈಜುಕೊಳ ನಿರ್ಮಾಣ ಮಾಡುವ ಬಗ್ಗೆ ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡೆ ಹಾಗೂ ಯೋಜನಾ ಸಚಿವರ ಗಮನ ಸೆಳೆಯುವುದು.

2) **ಶ್ರೀ ಡಿ. ವೇದವ್ಯಾಸ ಕಾಮತ್ ಅವರು** – ನರ್ಮ್ ಯೋಜನೆಯಡಿ ಮಂಗಳೂರು ನಗರ ವ್ಯಾಪ್ತಿಯಲ್ಲಿ ಕೆ.ಎಸ್.ಆರ್.ಟಿ.ಸಿ. ಸಿಟಿ ಬಸ್ಸುಗಳ ಸೌಲಭ್ಯವನ್ನು ಒದಗಿಸಲು ಪರವಾನಗಿ ನೀಡುವ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿಯವರ (ಸಾರಿಗೆ) ಗಮನ ಸೆಳೆಯುವುದು.

3) **ಶ್ರೀ ಎಸ್.ಎನ್. ಸುಬ್ಬಾರೆಡ್ಡಿ ಅವರು** – ಸಪ್ತಪದಿ ಸಾಮೂಹಿಕ ವಿವಾಹ ಕಾರ್ಯಕ್ರಮವನ್ನು ಬಾಗೇಪಲ್ಲಿ ತಾಲ್ಲೂಕಿನ ಐತಿಹಾಸಿಕ ಶ್ರೀ ಲಕ್ಷ್ಮಿ ವೆಂಕಟರಮಣಸ್ವಾಮಿ ದೇವಾಲಯದಲ್ಲಿ ಏರ್ಪಡಿಸಲು ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

4) **ಶ್ರೀ ಟಿ.ಡಿ ರಾಜೇಗೌಡ ಅವರು** – ಕೊರೋನಾ ಹಿನ್ನೆಲೆಯಲ್ಲಿ ಲಾಕ್‌ಡೌನ್ ಆದ ಸಂದರ್ಭದಲ್ಲಿ ಕರ್ತವ್ಯ ನಿರ್ವಹಿಸಿದ ಪತ್ರಕರ್ತರುಗಳನ್ನು ಕೊರೋನಾ ವಾರಿಯರ್ಸ್ ಎಂದು ಪರಿಗಣಿಸಿ ಆದ್ಯತೆ ಮೇಲೆ ಲಸಿಕೆ ನೀಡುವ ಬಗ್ಗೆ ಮಾನ್ಯ ವೈದ್ಯಕೀಯ ಶಿಕ್ಷಣ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

5) **ಶ್ರೀ ಅಭಯ ಪಾಟೀಲ ಅವರು** – ಬೆಳಗಾವಿ ದಕ್ಷಿಣ ಮತಕ್ಷೇತ್ರದ ವಿವಿಧ ಕೈಗಾರಿಕಾ ಪ್ರದೇಶಗಳಿಂದ ರಾಷ್ಟ್ರೀಯ ಹೆದ್ದಾರಿಗೆ ಸಂಪರ್ಕ ಕಲ್ಪಿಸುವ ರಸ್ತೆಗಳ ಅಭಿವೃದ್ಧಿಗೆ ಅನುದಾನ ಬಿಡುಗಡೆ ಮಾಡುವ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿಯವರ (ಲೋಕೋಪಯೋಗಿ) ಗಮನ ಸೆಳೆಯುವುದು.

6) **ಶ್ರೀ ಡಿ.ಸಿ. ತಮ್ಮಣ್ಣ ಅವರು** – ತ್ವರಿತಗತಿಯಲ್ಲಿ ಬೆಳೆಯುತ್ತಿರುವ ಮದ್ದೂರು ಪಟ್ಟಣದಲ್ಲಿ ಬಿಎಂಐಸಿಪಿಯ ಕಛೇರಿಯನ್ನು ತೆರೆಯುವ ಬಗ್ಗೆ ಮಾನ್ಯ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

7) **ಶ್ರೀ ಗೂಳಿಹಟ್ಟಿ ಡಿ. ಶೇಖರ್ ಅವರು** – ಆನೇಕಲ್ ತಾಲ್ಲೂಕಿನ ಜಿಗಣಿ ಹೋಬಳಿ ಹುಲಿಮಂಗಲದ ಸರ್ಕಾರಿ ಜಾಗದಲ್ಲಿ ಅನಧಿಕೃತವಾಗಿ ನಿರ್ಮಿಸಿರುವ ಬಹುಮಹಡಿ ಹಾಗೂ ವಿಲ್ಲಾಗಳನ್ನು ತೆರವುಗೊಳಿಸುವ ಬಗ್ಗೆ ಹಾಗೂ ಅಕ್ರಮ ದಾಖಲೆಗಳನ್ನು ಸೃಷ್ಟಿಸಲು ಸಹಕರಿಸಿದ ಅಧಿಕಾರಿಗಳ ವಿರುದ್ಧ ಕ್ರಮ ಜರುಗಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

8) **ಶ್ರೀ ಕೆ. ಮಹದೇವ್ ಅವರು** – ಪಿರಿಯಾಪಟ್ಟಣ ಮತಕ್ಷೇತ್ರದ ವಿವಿಧ ಗ್ರಾಮಗಳಲ್ಲಿ ಆನೆಗಳ ಹಾವಳಿಯಿಂದ ಉಂಟಾಗುತ್ತಿರುವ ಬೆಳೆ ನಷ್ಟ ಹಾಗೂ ಮಾನವ–ಆನೆ ಸಂಘರ್ಷವನ್ನು ತಡೆಯುವ ಬಗ್ಗೆ ಮಾನ್ಯ ಅರಣ್ಯ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

9) **ಶ್ರೀ ಅಬ್ಬಯ್ಯ ಪ್ರಸಾದ್ ಅವರು** – ಹುಬ್ಬಳ್ಳಿ–ಧಾರವಾಡ (ಪೂರ್ವ) ಮತಕ್ಷೇತ್ರದ ವ್ಯಾಪ್ತಿಯಲ್ಲಿ ಸರ್ಕಾರಿ ಪದವಿಪೂರ್ವ ಕಾಲೇಜನ್ನು ಪ್ರಾರಂಭಿಸುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರ ಗಮನ ಸೆಳೆಯುವುದು.

10) **ಶ್ರೀ ದೊಡ್ಡನಗೌಡ ಜಿ. ಪಾಟೀಲ್ ಅವರು** – ಹುನಗುಂದ ತಾಲ್ಲೂಕಿನ ಮರೋಳ ಏತ ನೀರಾವರಿ ಯೋಜನೆ 2ನೇ ಹಂತದ ಕಳಪೆ ಕಾಮಗಾರಿಯ ಬಗ್ಗೆ ತನಿಖೆ ನಡೆಸಿ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

11) **ಶ್ರೀಯುತರುಗಳಾದ ಕೆ.ಎಸ್. ಲಿಂಗೇಶ್, ಕೆ.ಎಂ. ಶಿವಲಿಂಗೇಗೌಡ, ಹೆಚ್.ಡಿ. ರೇವಣ್ಣ, ಎ.ಟಿ. ರಾಮಸ್ವಾಮಿ ಹಾಗೂ ಸಿ.ಎನ್. ಬಾಲಕೃಷ್ಣ ಅವರುಗಳು** – ಪ್ರಭಾರಿ ಹಾಸನ ಉಪವಿಭಾಗ ಮತ್ತು ಹಾಲಿ ಸಹಕಾರ ಸಂಘಗಳ ಉಪ ನಿಬಂಧಕರ ಕಛೇರಿಯಲ್ಲಿ ಅಭಿವೃದ್ಧಿ ಅಧಿಕಾರಿಯಾಗಿದ್ದುಕೊಂಡು ಪ್ರಭಾರಿ ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಸಕಲೇಶಪುರ ಉಪವಿಭಾಗ ಇಲ್ಲಿಯೂ ಸಹ ಅನಧಿಕೃತವಾಗಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿಯವರು ಕಾನೂನುಬಾಹಿರ ಅಕ್ರಮಗಳನ್ನು ನಡೆಸಿ, ಸಾರ್ವಜನಿಕರಿಗೆ/ರೈತರಿಗೆ ತೊಂದರೆ ನೀಡುತ್ತಿದ್ದು, ಅವರ ವಿರುದ್ಧ ಕಾನೂನು ರೀತ್ಯ ಕ್ರಮ ಜರುಗಿಸುವ ಬಗ್ಗೆ ಮಾನ್ಯ ಸಹಕಾರ ಸಚಿವರ ಗಮನ ಸೆಳೆಯುವುದು.

ಎಂ.ಕೆ.ವಿಶಾಲಾಕ್ಷಿ
ಕಾರ್ಯದರ್ಶಿ(ಪ್ರ)

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ಅಂತರ್ಜಾಲದ ಈ ವಿಳಾಸದಲ್ಲಿ ಪಡೆದುಕೊಳ್ಳಬಹುದು
http://kla.kar.nic.in/assembly/lob/lob.htm